# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 364
2) ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3) ಉತ್ತರಿಸಬೇಕಾದ ದಿನಾಂಕ: : 21.12.2022
4) ಉತ್ತರಿಸುವವರು : ಮಾನ್ಯ ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರಿನಿಂದ ಚೆನ್ನೈಗೆ ವಂದೇ ಭಾರತ್ ರೈಲು ಮಧ್ಯಾಹ್ನ 1.05 ಗಂಟೆಗೆ ಹೊರಡುತ್ತಿದ್ದು, ಹಾಗೂ ಶತಾಬ್ದಿ ರೈಲು ಮಧ್ಯಾಹ್ನ 2.15 ಗಂಟೆಗೆ ಹೊರಡುತ್ತಿದ್ದು, ಇದರಿಂದ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಿಲ್ಲದೆ, ಪ್ರಯಾಣಿಕರ ಸಂಖ್ಯೆಯು ಗಣನೀಯವಾಗಿ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ದೇಶದಲ್ಲಿ ಅತೀ ವೇಗದಲ್ಲಿ ಸಂಚರಿಸುತ್ತಿರುವ ಹಾಗೂ ಅತ್ಯಾಧುನಿಕ ತಂತ್ರಜ್ಞಾನವುಳ್ಳ ವಂದೇ ಭಾರತ್ ರೈಲನ್ನು ಮಾನ್ಯ ಪ್ರಧಾನ ಮಂತ್ರಿಯವರು ಚೆನ್ನೈ-ಬೆಂಗಳೂರು-ಮೈಸೂರು ಮಾರ್ಗದಲ್ಲಿ ದಿನಾಂಕ:11.11.2022ರಂದು ಚಾಲನೆ ನೀಡಿರುತ್ತಾರೆ. ಇದು ದೇಶದಲ್ಲಿ ಆರಂಭಗೊಂಡಿರುವ 5ನೇಯ ವಂದೇ ಭಾರತ್ ರೈಲು ಸೇವೆಯಾಗಿರುತ್ತದೆ.<br>ರೈಲು ಪ್ರಯಾಣಿಕರು ರಾಷ್ಟ್ರದ ಪ್ರಮುಖ ನಗರಗಳ ನಡುವೆ ಕ್ಷಿಪ್ರವಾಗಿ ಸಂಚರಿಸಲು ಅನುಕೂಲವಾಗುವ ಉದ್ದೇಶದಿಂದ ಈ ರೈಲು ಸೇವೆಗಳನ್ನು ಆರಂಭಿಸಲಾಗಿದೆ. |
| ಆ) | ಇದರಿಂದಾಗಿ ರೈಲ್ವೆ ಇಲಾಖೆಗೂ ಆರ್ಥಿಕ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ವಂದೇ ಭಾರತ್ ರೈಲು ಸೇವೆಯು ಆರಂಭವಾದ ನಂತರ ಶತಾಬ್ದಿ ಹಾಗೂ ವಂದೇ ಭಾರತ್ ಎರಡು ರೈಲುಗಳಲ್ಲೂ ಬಹುತೇಕ ಪೂರ್ಣಪ್ರಮಾಣದಲ್ಲಿ ಪ್ರಯಾಣಿಕರು ಪ್ರಯಾಣಿಸುತ್ತಿರುವುದರಿಂದ ಯಾವುದೇ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲ ಎಂದು ನೈರುತ್ಯ ರೈಲ್ವೆ ತಿಳಿಸಿರುತ್ತದೆ. |
| ಇ) | ಸದರಿ ರೈಲುಗಳ ಪ್ರಯಾಣದ ವೇಳೆಯನ್ನು ಮಾರ್ಪಡಿಸಲು ಕೇಂದ್ರ ಸರ್ಕಾರದ ಜೊತೆ ಸಮಾಲೋಚಿಸಿ, ಕ್ರಮ ಕೈಗೊಳ್ಳಲಾಗುವುದೇ: | ವಂದೇ ಭಾರತ್ ಹಾಗೂ ಶತಾಬ್ದಿ ಸೂಪರ್ ಫಾಸ್ಟ್ ರೈಲುಗಳು ಕೇವಲ ಒಂದೇ ಗಂಟೆಯ ಅಂತರದಲ್ಲಿ ಮೈಸೂರು ರೈಲ್ವೆ ನಿಲ್ದಾಣದಿಂದ ಹೊರಡುತ್ತಿರುವುದರಿಂದ ರೈಲು ವೇಳಾಪಟ್ಟಿಯ ಬದಲಾವಣೆ ಬಗ್ಗೆ ಪರಿಶೀಲಿಸಿ ಕ್ರಮವಹಿಸುವಂತೆ ರೈಲ್ವೆ ಮಂತ್ರಾಲಯವನ್ನು ಪತ್ರ ಮುಖೇನ ಕೋರಲಾಗುವುದು. |
| ಈ) | ಸದರಿ ರೈಲುಗಳು ಮಂಡ್ಯದಲ್ಲಿ ನಿಲುಗಡೆ ಇಲ್ಲದಿರುವುದರಿಂದ ಮಂಡ್ಯದಿಂದ ಬೆಂಗಳೂರು, ಚೆನ್ನೈಗೆ ಸಂಚರಿಸುವ ಪ್ರಯಾಣಿಕರಿಗೆ ಬಹಳ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಈ ಎರಡೂ ರೈಲುಗಳಿಗೆ ಮಂಡ್ಯದಲ್ಲಿ ನಿಲುಗಡೆ ಇರುವುದಿಲ್ಲ. ಆದರೆ ಈ ಎರಡು ರೈಲುಗಳನ್ನು ಹೊರತುಪಡಿಸಿ ಬೆಂಗಳೂರು-ಮೈಸೂರು ನಡುವೆ ಸಂಚರಿಸುವ ಉಳಿದೆಲ್ಲ ರೈಲುಗಳ ನಿಲುಗಡೆಯನ್ನು ಮಂಡ್ಯದಲ್ಲಿ ನೀಡಲಾಗಿದೆ ಎಂದು ರೈಲ್ವೆ ಇಲಾಖೆಯು ಮಾಹಿತಿಯನ್ನು ನೀಡಿರುತ್ತದೆ.<br>ಮಂಡ್ಯದಲ್ಲಿ ಈ ಎರಡೂ ರೈಲುಗಳಿಗೂ ಸಹ ನಿಲುಗಡೆ ಒದಗಿಸುವ ಕುರಿತ ಮಾನ್ಯ ಸದಸ್ಯರ ಕೋರಿಕೆಯನ್ನು ರೈಲ್ವೆ ಮಂತ್ರಾಲಯಕ್ಕೆ ಅಗತ್ಯ ಕ್ರಮಕೈಗೊಳ್ಳುವಂತೆ ಪತ್ರ ಮುಖೇನ ತಿಳಿಸಲಾಗುವುದು. |
| ಉ) | ಹಾಗಾದ್ದಲ್ಲಿ, ಮಂಡ್ಯದಲ್ಲಿ ನಿಲುಗಡೆ ಕಲ್ಪಿಸಲು, ಕೇಂದ್ರ ಸರ್ಕಾರದ ಜೊತೆ ಸಮಾಲೋಚಿಸಿ ಯಾವ ಕಾಲಮಿತಿಯಲ್ಲಿ ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುವುದು? | |

**ಸಂಖ್ಯೆ: ಮೂಅಇ 258 ರಾರಾಹೆ 2022/ಇ**

**(ವಿ.ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ
ಸಚಿವರು